# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

### **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 24-03-2021 ಪ್ರಶ್ನೆ ಸಂಖ್ಯೆ : 1782 (2017)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 24-03-2021

ಉತ್ತರಿಸುವ ಸಚಿವರು: ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ವಿಷಯ : ವಸತಿ ಗೃಹದಲ್ಲಿ ವಿದ್ಯಾರ್ಥಿಗಳಿಗೆ ಮೂಲಭೂತ ಸೌಕರ್ಯ ಒದಗಿಸುವಲ್ಲಿ ಅವ್ಯವಹಾರ ಆಗುತ್ತಿರುವ ಬಗ್ಗೆ

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು; ಅವು ಯಾವುವು ; (ಜಿಲ್ಲಾ ಮತ್ತು ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ಹಾಸ್ಟೆಲ್‌ಗಳನ್ನು 2019-20 ಹಾಗೂ 2020-21ನೇ ಸಾಲಿನಲ್ಲಿ ಯಾವಾಗ ಪ್ರಾರಂಭಿಸಲಾಯಿತು; ಅದರಲ್ಲಿ ವಾಸ್ತವ್ಯವಿರುವ ಮಕ್ಕಳ ಸಂಖ್ಯೆ ಎಷ್ಟು; ಇವರಿಗೆ ನೀಡಿರುವ ಮೂಲಭೂತ ಸೌಕರ್ಯ ಏನು ; (ವಾಸ್ತವ್ಯವಿರುವ ವಿದ್ಯಾರ್ಥಿಗಳ ಖರ್ಚು ವೆಚ್ಚದ ಸಂಪೂರ್ಣ ವಿವರ ನೀಡುವುದು)

(ಇ) 2020-21ನೇ ಸಾಲಿನಲ್ಲಿ ಎಷ್ಟು ವಿದ್ಯಾರ್ಥಿಗಳು ಹಾಸ್ಟೆಲ್‌ನಲ್ಲಿ ಪ್ರವೇಶಾತಿ ಪಡೆದಿರುತ್ತಾರೆ; ಹಾಸ್ಟೆಲ್‌ಗಳು ಪ್ರಾರಂಭಿಸಲು ಇರುವ ನಿಯಮಾವಳಿಗಳೇನು; ಸಂಬಂಧಿಸಿದ ವಿದ್ಯಾರ್ಥಿಗಳಿಗೆ ಯಾವ ದಿನಾಂಕದಿಂದ ಮೂಲಭೂತ ಸೌಲಭ್ಯ ಒದಗಿಸಿರುತ್ತೀರಿ ;

(ಈ) ಇಲ್ಲಿಯವರೆಗೆ ಬಂದಿರುವ ಅನುದಾನ ಮತ್ತು ಯಾವ ಯಾವ ಸೌಕರ್ಯಗಳಿಗೆ ಎಷ್ಟು ಮೊತ್ತವನ್ನು ಖರ್ಚು ಮಾಡಲಾಗಿದೆ? (ತಿಂಗಳವಾರು, ವರ್ಷವಾರು ಯಾವ ಯಾವ ಲೆಕ್ಕಶೀರ್ಷಿಕೆಯಲ್ಲಿ ಅನುದಾನ-ಖರ್ಚು ಮಾಡಿರುವ ಸವಿಸ್ತಾರ ವರದಿ ನೀಡುವುದು)